# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1608
2. ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಡಾ. ಎಂ.ಜಿ. ಮುಳೆ (ವಿಧಾನಸಭಾ ಕ್ಷೇತ್ರ)
3. ಉತ್ತರಿಸುವ ದಿನಾಂಕ : 21-03-2025
4. ಉತ್ತರಿಸುವ ಸಚಿವರು : ಮಾನ್ಯ ಕಾರ್ಮಿಕ ಸಚಿವರು.

| ಕ್ರ.ಸಂ | ಪ್ರಶ್ನೆಗಳು | ಉತ್ತರ |
|---|---|---|
| (ಅ) | ಹೋಟೆಲ್‌ಗಳು ಮುಂತಾದ ಕಡೆಗಳಲ್ಲಿ ಬಾಲಕಾರ್ಮಿಕರನ್ನು ನೇಮಕ ಮಾಡಿಕೊಳ್ಳಬಾರದು ಎಂಬ ನಿಯಮ ಜಾರಿಯಲ್ಲಿದೆಯೇ; | ಹೌದು, ಬಾಲ ಹಾಗೂ ಕಿಶೋರ ಕಾರ್ಮಿಕ(ನಿಷೇಧ ಮತ್ತು ನಿಯಂತ್ರಣ) ತಿದ್ದುಪಡಿ ನಿಯಮಗಳು, 2017(ಕೇಂದ್ರ/ರಾಜ್ಯ)ರನ್ವಯ ಹೋಟೆಲ್‌ಗಳು ಹಾಗೂ ಮುಂತಾದ ಕಡೆಗಳಲ್ಲಿ ಬಾಲಕಾರ್ಮಿಕರನ್ನು ನೇಮಕ ಮಾಡಿಕೊಳ್ಳುವುದನ್ನು ನಿಷೇಧಿಸಲಾಗಿದೆ. |
| (ಆ) | ಅನೇಕ ಹೋಟೆಲ್‌ಗಳು ಮತ್ತಿತರ ಸ್ಥಳಗಳಲ್ಲಿ ಈಗಲೂ ಬಾಲ ಕಾರ್ಮಿಕರನ್ನು ನೇಮಿಸಿಕೊಂಡು ಕೆಲಸ ಮಾಡಿಸುತ್ತಿದ್ದು, ಎಷ್ಟು ಕಡೆಗಳಲ್ಲಿ ಅಧಿಕಾರಿಗಳು ತಪಾಸಣೆ ಮಾಡಿ ಕ್ರಮ ಕೈಗೊಂಡಿದ್ದಾರೆ:(ಕಳೆದ ಮೂರು ವರ್ಷಗಳ ಮಾಹಿತಿ ನೀಡುವುದು) | ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986ರ ಕಲಂ 17ರಡಿ ಸರ್ಕಾರದ 11 ಇಲಾಖೆಗಳ ಅಧಿಕಾರಿಗಳನ್ನು ನಿರೀಕ್ಷಕರುಗಳನ್ನಾಗಿ ನೇಮಿಸಲಾಗಿದೆ. ಅಧಿಸೂಚಿಸಲ್ಪಟ್ಟ ಅಧಿಕಾರಿಗಳ ತಂಡಗಳನ್ನು ರಚಿಸಿ ಪ್ರತಿಯೊಂದು ತಂಡವೂ ಮಾಸಿಕ ಕನಿಷ್ಠ 15 ತಪಾಸಣೆಗಳನ್ನು ಕೈಗೊಳ್ಳಲು ನಿರ್ದೇಶನ ನೀಡಲಾಗಿದೆ ಹಾಗೂ ಜಿಲ್ಲಾ ದಂಡಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಕಾರ್ಯಪಡೆ (Task Force) ಯನ್ನು ರಚಿಸಲಾಗಿದ್ದು, ಅದರನ್ವಯ ಅಧಿಕಾರಿಗಳ/ನಿರೀಕ್ಷಕರುಗಳ ಮೂಲಕ ಹೋಟೆಲ್ ಹಾಗೂ ಮತ್ತಿತರ ಸ್ಥಳಗಳಲ್ಲಿ ದೂರು ಆಧಾರಿತ ಹಾಗೂ ಸ್ವಯಂ ಆಗಿ ತಪಾಸಣೆಗಳು / ದಾಳಿಗಳನ್ನು ನಡೆಸಲಾಗುತ್ತಿದೆ. ಕಳೆದ ಮೂರು ವರ್ಷಗಳಲ್ಲಿ ನಡೆಸಲಾದ ಬಾಲ ಹಾಗೂ ಕಿಶೋರ ಕಾರ್ಮಿಕರ ತಪಾಸಣೆಗಳ ವಿವರಗಳು ಈ ಕೆಳಕಂಡಂತಿರುತ್ತವೆ; |

| ವರ್ಷ | ತಪಾಸಣೆಗಳ ಸಂಖ್ಯೆ | ರಕ್ಷಿಸಲಾದ ಬಾಲ ಕಾರ್ಮಿಕರ ಸಂಖ್ಯೆ | ಪತ್ತೆಯಾದ ಪ್ರಕರಣಗಳ ಸಂಖ್ಯೆ | ಸಕ್ಷಮ ನ್ಯಾಯಾಲಯಗಳಲ್ಲಿ ದಾಖಲಾದ ಮೊಕದ್ದಮೆಗಳ ಸಂಖ್ಯೆ | ನ್ಯಾಯಾಲಯಗಳು ಶಿಕ್ಷೆ ವಿಧಿಸಲಾದ ಪ್ರಕರಣಗಳ ಸಂಖ್ಯೆ | ನ್ಯಾಯಾಲಯಗಳಿಂದ ವಸೂಲಾದ ದಂಡ (ರೂ.ಗಳಲ್ಲಿ) |
|---|---|---|---|---|---|---|
| 2022 | 23109 | 581 | 200 | 155 | 24 | 6,32,000 |
| 2023 | 39001 | 707 | 414 | 260 | 15 | 7,20,000 |
| 2024 | 41652 | 781 | 556 | 287 | 19 | 18,58,000 |
| **ಒಟ್ಟು** | **103762** | **2069** | **1170** | **702** | **58** | **32,10,000** |

**(ಇ)** ಬಾಲಕಾರ್ಮಿಕರ ರಕ್ಷಣೆಗಾಗಿ ಯಾವ ಯಾವ ಯೋಜನೆಗಳಿವೆ; ಇದರ ಅನುಷ್ಠಾನ ಸಮರ್ಪಕವಾಗಿ ನಡೆಯುತ್ತಿದೆಯೇ; ಕಳೆದ ಎರಡು ವರ್ಷಗಳಲ್ಲಿ ಎಷ್ಟು ಬಾಲಕಾರ್ಮಿಕರನ್ನು ರಕ್ಷಣೆ ಮಾಡಿ ಸಹಾಯ ಮಾಡಲಾಗಿದೆ?(ವಿವರ ನೀಡುವುದು)

ಬಾಲ ಕಾರ್ಮಿಕರ ರಕ್ಷಣೆಗಾಗಿ ಕರ್ನಾಟಕ ರಾಜ್ಯ ಸರ್ಕಾರವು ರಾಜ್ಯ ಬಾಲಕಾರ್ಮಿಕ ಪುನರ್ವಸತಿ ಯೋಜನೆಯನ್ನು ಜಾರಿಗೆ ತಂದಿರುತ್ತದೆ. ಸದರಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲು ರಾಜ್ಯ ಮಟ್ಟದಲ್ಲಿ ಸರ್ಕಾರದ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಕರ್ನಾಟಕ ರಾಜ್ಯ ಬಾಲಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿಯನ್ನು ಹಾಗೂ ಪ್ರತಿ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗಳನ್ನು ಸ್ಥಾಪಿಸಲಾಗಿದೆ. ಸದರಿ ಸೊಸೈಟಿಗಳ ಮೂಲಕ ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986, ನಿಯಮಗಳು–2017 (ಕೇಂದ್ರ/ಕರ್ನಾಟಕ) ಹಾಗೂ ಬಾಲ ಹಾಗೂ ಕಿಶೋರ ಕಾರ್ಮಿಕ ಮುಕ್ತ ಜಿಲ್ಲೆಗಳ ಘೋಷಣೆ ಹೊರಡಿಸಲು ಅವಶ್ಯವಿರುವ ಎಸ್.ಒ.ಪಿ(ಕೇಂದ್ರ/ಕರ್ನಾಟಕ)ಗಳ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲಾಗುತ್ತಿದೆ. ಕಳೆದ ಎರಡು ವರ್ಷಗಳಲ್ಲಿ ರಕ್ಷಿಸಲಾದ ಬಾಲ ಹಾಗೂ ಕಿಶೋರ ಕಾರ್ಮಿಕರ ವಿವರಗಳು ಈ ಕೆಳಕಂಡಂತಿರುತ್ತವೆ;

| ವರ್ಷ | ತಪಾಸಣೆ ಗಳ ಸಂಖ್ಯೆ | ರಕ್ಷಿಸಲಾದ ಬಾಲ ಕಾರ್ಮಿಕರ ಸಂಖ್ಯೆ | ಪತ್ತೆಯಾದ ಪ್ರಕರಣಗಳ ಸಂಖ್ಯೆ | ಸಕ್ಷಮ ನ್ಯಾಯಾಲಯಗಳಲ್ಲಿ ದಾಖಲಾದ ಮೊಕದ್ದಮೆಗಳ ಸಂಖ್ಯೆ | ನ್ಯಾಯಾಲಯಗಳು ಶಿಕ್ಷೆ ವಿಧಿಸಲಾದ ಪ್ರಕರಣಗಳ ಸಂಖ್ಯೆ | ನ್ಯಾಯಾಲಯಗಳಿಂದ ವಸೂಲಾದ ದಂಡ (ರೂ.ಗಳಲ್ಲಿ) |
|---|---|---|---|---|---|---|
| 2023 | 39001 | 707 | 414 | 260 | 15 | 7,20,000 |
| 2024 | 41652 | 781 | 556 | 287 | 19 | 18,58,000 |
| **ಒಟ್ಟು** | **80653** | **1488** | **970** | **547** | **34** | **25,78,000** |

ಮೇಲ್ಕಂಡಂತೆ ತಪಾಸಣೆಗಳಲ್ಲಿ / ದಾಳಿಗಳಲ್ಲಿ ರಕ್ಷಿಸಲಾದ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಕಲ್ಯಾಣ ಸಮಿತಿ (Child Welfare Committee) ಯ ಬಾಲಕರ ಮತ್ತು ಬಾಲಕಿಯರ ಬಾಲಮಂದಿರಗಳಿಗೆ ಮತ್ತು ಸಮಾಜ ಕಲ್ಯಾಣ ಇಲಾಖೆ, ಸರ್ಕಾರಿ ಶಾಲೆಗಳು ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಿಗೆ, ಮುಖ್ಯವಾಹಿನಿ ಶಾಲೆಗಳಲ್ಲಿ ಮಕ್ಕಳ ಅರ್ಹತೆಗನುಗುಣವಾಗಿ ದಾಖಲು ಮಾಡಲಾಗಿದೆ.

**ಸಂಖ್ಯೆ: ಕಾಇ 21 ಸಿಎಲ್‌ಸಿ 2025**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**